# ಕರ್ನಾಟಕ ಸರ್ಕಾರ

ಸಂಖ್ಯೆ:ಆಸಾಂನಿ/ 09/ಆಡಳಿತ-3/2016-17 19305-74

ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು-1, ದಿನಾಂಕ: 19.09.2016

## ಸು ತ್ತೋ ಲೆ-2

ವಿಷಯ : ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ)ನಿಯಮಗಳ ಅನ್ವಯ ಕಡ್ಡಾಯವಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/43/ಸೇವನೆ/2008 ದಿನಾಂಕ: 07.03.2012
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/59/ಸೇವನೆ/2012 ದಿನಾಂಕ: 06.08.2012
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/43/ಎಸ್‌ಸಿಆರ್/2008 ದಿನಾಂಕ: 18.12.2012
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್/154/ಎಸ್‌ಸಿಆರ್/2014 ದಿನಾಂಕ: 27.04.2015
5. ಈ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಆಸಾಂನಿ/09/ಆಡಳಿತ-3/2016-17/16128-278 ದಿನಾಂಕ: 26.08.2016

*******

ಉಲ್ಲೇಖ(1)ರ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ)ನಿಯಮಗಳು 2012ನ್ನು ರಚಿಸಲಾಗಿದ್ದು, ನಂತರ ಉಲ್ಲೇಖ(2)ರ ಅಧಿಸೂಚನೆಯಲ್ಲಿ ನೇರ ನೇಮಕಾತಿಯ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಸದರಿ ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ತದನಂತರ ಉಲ್ಲೇಖ(3)ರ ಸರ್ಕಾರದ ಅಧಿಸೂಚನೆಯಲ್ಲಿ ಸದರಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಗೆ ಸಂಬಂಧಿಸಿದಂತೆ ಪಠ್ಯಕ್ರಮ(Syllabus) ಪರೀಕ್ಷೆಯ ಸ್ವರೂಪ (Pattern of testing)ಇತ್ಯಾದಿಗಳನ್ನು ನಿಗದಿಪಡಿಸಲಾಗಿರುತ್ತದೆ.

ಉಲ್ಲೇಖ(1),(2)&(4)ರ ಸರ್ಕಾರದ ಅಧಿಸೂಚನೆಯನ್ವಯ ಹೊಸದಾಗಿ ನೇರ ನೇಮಕಾತಿ ಹೊಂದಿದ ಅಧಿಕಾರಿ/ನೌಕರರ ಪ್ರಕರಣಗಳಲ್ಲಿ ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ)ನಿಯಮಗಳು 2012ರ ನಿಯಮಗಳ ಅನ್ವಯ ದಿನಾಂಕ:07.03.2012ರ ನಂತರ ನೇರ ನೇಮಕಾತಿ ಆದೇಶ ಪಡೆದಂತಹ ಅಭ್ಯರ್ಥಿಗಳು ದಿನಾಂಕ:07.03.2017ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಲು ಕಾಲಾವಕಾಶ ನೀಡಲಾಗಿರುತ್ತದೆ. ಅದರಂತೆ ಹೊಸದಾಗಿ ದಿನಾಂಕ: 07.03.2012ರ ನಂತರ ನೇರ ನೇಮಕಾತಿ ಹೊಂದಿದ ಅಧಿಕಾರಿ/ನೌಕರರು ಶೇಕಡಾ 60ರಷ್ಟು ಅಂಕಗಳಿಗೆ ಕಡಿಮೆ ಇಲ್ಲದಂತೆ ಅಂಕಗಳನ್ನು ಪಡೆದು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವುದು ಕಡ್ಡಾಯವಾಗಿರುತ್ತದೆ. ಇಲ್ಲವಾದಲ್ಲಿ ತದನಂತರದ ಮುಂಬಡ್ತಿಗಳಿಗೆ ಅರ್ಹರಿರುವುದಿಲ್ಲ ಹಾಗೂ ದಿನಾಂಕ: 07.03.2018ರ ನಂತರ ವಾರ್ಷಿಕ ವೇತನ ಬಡ್ತಿಗೆ ಅರ್ಹರಿರುವುದಿಲ್ಲ.

ಆದ್ದರಿಂದ, ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ)ನಿಯಮಗಳು 2012ರ ನಿಯಮಗಳು ಅನ್ವಯ ಈ ನಿರ್ದೇಶನಾಲಯದಲ್ಲಿ ದಿನಾಂಕ:07.03.2012ರ ನಂತರ ನೇರ ನೇಮಕಾತಿ ಹೊಂದಿದ ಎಲ್ಲಾ ಅಧಿಕಾರಿ/ನೌಕರರು ಸದರಿ ಅವಧಿಯೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೇರ್ಗಡೆ ಹೊಂದಲು ಸೂಚಿಸಿದೆ. ಉಲ್ಲೇಖಿತ ಸರ್ಕಾರದ ಅಧಿಸೂಚನೆಗಳನ್ವಯ ಕ್ರಮವಹಿಸುವಂತೆ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದೆ.

(ಕೆ.ವಿ. ಸುಬ್ರಮಣ್ಯಂ)
ನಿರ್ದೇಶಕರು

**ಪ್ರತಿಗಳು; ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:-**

1. ಎಲ್ಲಾ ಜಂಟಿ ನಿರ್ದೇಶಕರು, ಆಸಾಂನಿ, ಬೆಂಗಳೂರು - ನಿಮ್ಮ ಅಧೀನದಲ್ಲಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಈ ಕುರಿತು ಮಾಹಿತಿ ನೀಡುವುದು.
2. ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು - ನಿಮ್ಮ ಅಧೀನದಲ್ಲಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಈ ಕುರಿತು ಮಾಹಿತಿ ನೀಡುವುದು.
3. ಎಲ್ಲಾ ಅಧಿಕಾರಿ/ನೌಕರರಿಗೆ
4. ಕಛೇರಿ ಪ್ರತಿ.
5. ಕಛೇರಿ ಸೂಚನಾ ಫಲಕಕ್ಕೆ - ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲಾಗಿರುತ್ತದೆ.